# ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಸುತ್ತೋಲೆ/ಸ.ಪ್ರ.ದ.ಕಾ/ಆಯವ್ಯಯ/11/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:25.07.2022.

### ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2021-22ನೇ ಸಾಲಿನಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರಾಗಿ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಪಾವತಿಸುವ ಕುರಿತು.

ಉಲ್ಲೇಖ: 1.ಸರ್ಕಾರದ ಆದೇಶ ಸಂಖ್ಯೆ:ಇಡಿ/242 ಡಿಸಿಇ2021, ದಿನಾಂಕ:14.01.2022 ಮತ್ತು ದಿನಾಂಕ:24.01.2022.
2. ಕಾಶಿಇ/ನೇವಿ-1/ಅಉಆ/97/2021-22, ದಿನಾಂಕ:17.01.2022, 28.0.2022 & ದಿನಾಂಕ:30.01.2022.

* * * * * * *

ಪ್ರಸ್ತಾಪಿತ ವಿಷಯ ಮತ್ತು ಸರ್ಕಾರದ ಉಲ್ಲೇಖಿತ ಪತ್ರಕ್ಕೆ ಸಂಬಂಧಿಸಿದಂತೆ, 2021-22ನೇ ಸಾಲಿನಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ ಈಗಾಗಲೇ ಇಲಾಖೆಯ ಇ.ಎಂ.ಐ.ಎಸ್ ತಂತ್ರಾಂಶದಲ್ಲಿ ಲಭ್ಯವಿರುವ ಮಾಹಿತಿಯಂತೆ ಹಾಗೂ ಪ್ರಾಂಶುಪಾಲರುಗಳ ಪ್ರಸ್ತಾವನೆಯ ಮೇರೆಗೆ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನಕ್ಕಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿತ್ತು. ಬಿಡುಗಡೆ ಮಾಡಲಾಗಿರುವ ಸದರಿ ಅನುದಾನದಲ್ಲಿ ನ್ಯಾಯಾಲಯದ ಆದೇಶದ ಮೇರೆಗೆ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ನ್ಯಾಯಾಲಯದ ಆದೇಶದಂತೆ ಪರಿಶೀಲಿಸಿ ನಿಯಮಾನುಸಾರ ಗೌರವಧನ ಪಾವತಿಸಲು ಕ್ರಮವಹಿಸಲು ಹಾಗೂ ಕೇಂದ್ರಕಛೇರಿಯಿಂದ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅವಧಿಗೆ ಗೌರವಧನವನ್ನು ಪಾವತಿಸಲು ಈಗಾಗಲೇ ಸೂಚಿಸಲಾಗಿರುತ್ತದೆ ಹಾಗೂ ಹಿಂದಿನ ಮಾಹೆಗಳಿಗೆ ಕೊರತೆಯಾಗಿದ್ದಲ್ಲಿ ಗೌರವಧನವನ್ನು ಪಾವತಿಸಲು ಸೂಚಿಸಲಾಗಿರುತ್ತದೆ.
ಮುಂದುವರೆದು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಪಾವತಿಸಲು ಕೊರತೆಯಾಗಿದ್ದಲ್ಲಿ ಅನುದಾನದ ಮಾಹಿತಿಯನ್ನು ಈ ಕೆಳಕಂಡ ನಿಗಧಿತ ನಮೂನೆಯಲ್ಲಿ ಎಕ್ಷೇಲ್ ಫಾರ್‌ಮೇಟ್‌ಲ್ಲಿ ಸಾಫ್ಟ್ ಕಾಫಿಯನ್ನು ಇ-ಮೇಲ್ ವಿಳಾಸ: dcegfbudget@gmail.comಕ್ಕೆ ದಿನಾಂಕ:28.07.2022ರೊಳಗೆ ಕಳುಹಿಸಿಕೊಡಲು ಸೂಚಿಸಿದೆ ಮತ್ತು ನಿಗಧಿತ ಅವಧಿಯ ನಂತರ ಬರುವ ಪ್ರಸ್ತಾವನೆಗಳನ್ನು ಸ್ವೀಕರಿಸುವುದಿಲ್ಲ ಹಾಗೂ ಗೌರವಧನವನ್ನು ವಿತರಿಸುವ ಸಂಬಂಧ ವಿಳಂಬವಾದಲ್ಲಿ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತಾರೆ ಎಂಬ ಮಾಹಿತಿಯನ್ನು ಈ ಮೂಲಕ ತಿಳಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ನಮೂನೆ: ಪ್ರಾಂಶುಪಾಲರ ಹೆಸರು ಮತ್ತು ಮೊಬೈಲ್ ಸಂಖ್ಯೆ

| ಕ್ರ.ಸಂ | ಕಾಲೇಜಿನ ಹೆಸರು | ಕೇಂದ್ರಕಛೇರಿಯ ಹಾಗೂ ನ್ಯಾಯಾಲಯದ ಆದೇಶದ ಮೇರೆಗೆ ನೇಮಕಗೊಂಡಿರುವ ಒಟ್ಟು ಅತಿಥಿ ಉಪನ್ಯಾಸಕರುಗಳ ಸಂಖ್ಯೆ | PHD/NET/SLET ಹೊಂದಿರುವ ಒಟ್ಟು ಅತಿಥಿ ಉಪನ್ಯಾಸಕರುಗಳ ಸಂಖ್ಯೆ | ಎಂ.ಎ/ಎಂ.ಫಿಲ್ ಹೊಂದಿರುವ ಒಟ್ಟು ಅತಿಥಿ ಉಪನ್ಯಾಸಕರುಗಳ ಸಂಖ್ಯೆ | ಕೇಂದ್ರಕಛೇರಿಯ ಮತ್ತು ನ್ಯಾಯಾಲಯದ ಆದೇಶದ ಮೇರೆಗೆ ನೇಮಕಗೊಂಡು ಕರ್ತವ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಈಗಾಗಲೇ ಪಾವತಿಸಲಾಗಿರುವ ಒಟ್ಟು ಗೌರವಧನದ ಮೊತ್ತ | ಇನ್ನೂ ಬಾಕಿ ನೀಡಬೇಕಾಗಿರುವ ಗೌರವಧನದ ಒಟ್ಟು ಮೊತ್ತ | ಷರಾ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |

**ಇವರಿಗೆ.**
ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಯನ್ನು:**

1. ಪ್ರಾದೇಶಿಕ ಜಂಟಿ ನಿರ್ದೇಶಕರು. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರ್ಗಿ – 2021-22ನೇ ಸಾಲಿಗೆ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ ಅನುಮೋದನೆಯನ್ನು ನೀಡುವ ಸಂಬಂಧ ಕಾಲೇಜುಗಳಿಂದ ಮಾಹಿತಿಯನ್ನು ಪಡೆದು ಅನುಮೋದನೆಯನ್ನು ನೀಡುವ ಸಂಬಂಧ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಲಾಗಿದೆ..
2. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್ ಅಳವಡಿಸಲು ಸೂಕ್ತ ಕ್ರಮಕ್ಕಾಗಿ